**ಸಾಕ್ಷಿಗೆ ದಿನಾಂಕಃ 28.11.2025 ರಂದು ಕರೆಸಿ ಪ್ರಮಾಣ ವಚನ ಬೋಧಿಸಲಾಯಿತುಃ**

**ಮುಖ್ಯ ವಿಚಾರಣೆ: ಅರ್ಜಿದಾರರ ಪರ ವಕೀಲರಾದ ಶ್ರೀಮತಿ.BNN ರವರಿಂದಃ**

1) ನನ್ನ ಮುಖ್ಯ ವಿಚಾರಣೆ ಸಾಕ್ಷ್ಯಕ್ಕೆ ಬದಲಾಗಿ ನಾನು ಈ ದಿನ ನನ್ನ ಸಾಕ್ಷಿ ಪ್ರಮಾಣ ಪತ್ರವನ್ನು ಸಲ್ಲಿಸಿದ್ದೇನೆ. ಸದರಿ ಪ್ರಮಾಣ ಪತ್ರದಲ್ಲಿ ಬರೆದಿರುವ ಅಂಶಗಳು ಸತ್ಯವಾಗಿರುತ್ತವೆ ಮತ್ತು ಅದನ್ನು ನಾನು ಓದಿ ತಿಳಿದುಕೊಂಡು ನನ್ನ ಸಹಿಯನ್ನು ಮಾಡಿರುತ್ತೇನೆ. ಸದರಿ ಪ್ರಮಾಣ ಪತ್ರವನ್ನು ನನ್ನ ಹೇಳಿಕೆಗೆ ಅನುಸಾರವಾಗಿ ನಮ್ಮ ವಕೀಲರು ಸಿದ್ಧಪಡಿಸಿದ್ದಾರೆ.

2) **ಪ್ರಥಮ ವರ್ತಮಾನ ವರದಿಯನ್ನು** ಹಾಜರುಪಡಿಸಿದ್ದು ಅದನ್ನು **ನಿ.ಪಿ.1** ಎಂದು ಮತ್ತು **ಪೋಲಿಸರಿಗೆ ನೀಡಿರುವ ದೂರನ್ನು ನಿ.ಪಿ.2** ಎಂದು ಗುರುತಿಸಿದೆ.

**<u>ಸೂಚನೆಃ</u>** ನಿ.ಪಿ.**2** ದಾಖಲೆಯು ತೆಲುಗು ಭಾಷೆಯಲ್ಲಿದೆ. ಈ ದಾಖಲೆಯ ಭಾಷಾಂತರ ಪ್ರತಿಯನ್ನು ಹಾಜರುಪಡಿಸಿದ್ದು, ಅದನ್ನು **ನಿ.ಪಿ.2(ಎ)** ಎಂದು ಗುರುತಿಸಿದೆ.

3) **ಕೃತ್ಯ ನಡೆದ ಸ್ಥಳದ ನಕ್ಷೆಯನ್ನು** ನಿ.ಪಿ.**3** ಎಂದು, ಶವ ತನಿಖಾ ವರದಿಯನ್ನು ನಿ.ಪಿ.**4** ಎಂದು ಗುರುತಿಸಿದೆ.

**<u>ಸೂಚನೆಃ</u>** ನಿ.ಪಿ.**4** ದಾಖಲೆಯು ತೆಲುಗು ಭಾಷೆಯಲ್ಲಿದೆ. ಈ

ದಾಖಲೆಯ ಭಾಷಾಂತರ ಪ್ರತಿಯನ್ನು ಹಾಜರುಪಡಿಸಿದ್ದು, ಅದನ್ನು **ನಿ.ಪಿ.4(ಎ)** ಎಂದು ಗುರುತಿಸಿದೆ.

4) **ಶವ ಪರೀಕ್ಷಾ ವರದಿಯನ್ನು ನಿ.ಪಿ.5 ಎಂದು, ಅಂತಿಮ ವರದಿಯನ್ನು ನಿ.ಪಿ.6 ಎಂದು, ಐಎಂವಿ ವರದಿಯನ್ನು ನಿ.ಪಿ.7 ಎಂದು ಗುರುತಿಸಿದೆ.**

**<u>ಸೂಚನೆಃ</u> ನಿ.ಪಿ.1 ರಿಂದ 7** ಎಂದು ಗುರುತು ಆಗಿರುವ ದಾಖಲೆಗಳು ಗೋರಂಟ್ಲ ಪೊಲೀಸ್ ಠಾಣೆಯವರು ನೀಡಿರುವಂತಹ ಯಥಾ ನಕಲುಗಳು ಆಗಿವೆ.

5) ಅಪಘಾತದಲ್ಲಿ ಮರಣ ಹೊಂದಿದ ಮಧು ರವರ ಮೂಲ ಮರಣ ಪ್ರಮಾಣ ಪತ್ರ ಮತ್ತು ಈ ಸಾಕ್ಷಿದಾರರ ಮತ್ತು ಇತರೆ ಸಾಕ್ಷಿದಾರರ ಮೂಲ ಆಧಾರ್ ಕಾರ್ಡ್ ಗಳನ್ನು ಮತ್ತು ಇದೇ ದಾಖಲೆಗಳ ಫೋಟೋ ಪ್ರತಿಗಳನ್ನು ಹಾಜರುಪಡಿಸಿದ್ದಾರೆ. ಸದರಿ ಮೂಲ ಪ್ರತಿಗಳನ್ನು ಮತ್ತು ಫೋಟೋ ಪ್ರತಿಗಳನ್ನು ಹೋಲಿಕೆ ಮಾಡಿ ನೋಡಲಾಗಿ ಈ ಮೂಲ ದಾಖಲೆಗಳನ್ನು ಆಧಾರವಾಗಿ ಇಟ್ಟುಕೊಂಡು ಯಾಂತ್ರಿಕ ಸಹಾಯದಿಂದ ಈ ಫೋಟೋ ಪ್ರತಿಗಳನ್ನು ಸಿದ್ಧಪಡಿಸಿದ್ದಾರೆ ಎಂದು ಕಂಡು ಬರುತ್ತದೆ. ಆದ ಕಾರಣದಿಂದ ಸದರಿ ಫೋಟೋ ಪ್ರತಿಗಳನ್ನು ನಿ.ಪಿ.**8** ರಿಂದ **12** ಎಂದು ಗುರುತಿಸಿದೆ ಮತ್ತು ಮೂಲ ದಾಖಲೆಗಳನ್ನು ಈ ಸಾಕ್ಷಿದಾರರಿಗೆ ವಾಪಸ್ಸು ನೀಡಿದೆ.

**<u>ಈ ಹಂತದಲ್ಲಿ ಮತ್ತೆ ಕೆಲವು ದಾಖಲೆಗಳನ್ನು ಹಾಜರುಪಡಿಸಲು ಸಾಕ್ಷಿದಾರರು ಸಮಯ ಕೇಳಿದ್ದಾರೆ, ಸಮಯ ನೀಡಿದೆ.</u>**

(ನನ್ನ ಉಕ್ತಲೇಖನದಂತೆ ತೆರೆದ ನ್ಯಾಯಾಲಯದಲ್ಲಿ ಗಣಕಯಂತ್ರದಲ್ಲಿ ಬೆರಳಚ್ಚು ಮಾಡಿಸಲ್ಪಟ್ಟಿದೆ)

**(ಓ.ಹೇ.ಕೇ.ಸ.ಇ)**

**ಮುಖ್ಯ ನ್ಯಾಯಾಧೀಶರು,**
ಲಘು ವ್ಯವಹಾರಗಳ ನ್ಯಾಯಾಲಯ,
ಬೆಂಗಳೂರು.